ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು–01

ಸಂಖ್ಯೆ:ಸಿ8[7]ಶಾಶಿಅ ಮಾ ನ 01/2018–19. ದಿನಾಂಕ: 29.09.2018

## ಸುತ್ತೋಲೆ

**********

ವಿಷಯ:–ರಾಜ್ಯದಲ್ಲಿನ ಖಾಸಗಿ ಅನುದಾನಿತ/ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ದಾಖಲಾತಿ/ಹಾಜರಾತಿ ಕನಿಷ್ಠಕ್ಕಿಂತ ಕಡಿಮೆ ಇರುವ ಶಾಲೆಗಳಿಗೆ ಮಾನ್ಯತೆ ನವೀಕರಿಸುವ ಬಗ್ಗೆ.

ಉಲ್ಲೇಖ:1. ಕರ್ನಾಟಕ ಶಿಕ್ಷಣ ಕಾಯ್ದೆ 1983 ಕರ್ನಾಟಕ ಶಿಕ್ಷಣ ಸಂಸ್ಥೆಗಳು [ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳ ಮಾನ್ಯತೆ ನಿಯಮಗಳು 1999 ನಿಯಮ–99[4][ಕೆ]

2. ಸರ್ಕಾರದ ಆದೇಶ ಸಂಖ್ಯೆ: ಇಡಿ 324 ಎಸ್‌ಎಲ್‌ಬಿ 2015 ದಿನಾಂಕ: 29.10.2015
3. ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 27.11.2015
4. ಸರ್ಕಾರದ ಸುತ್ತೋಲೆ ದಿನಾಂಕ: 02.11.2016
5. ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ8[7] ಶಾಶಿಅ/ಅಧಿಕ ವಿಭಾಗ]/2001–02 ದಿನಾಂಕ: 18.08.2002
6. ಕರ್ನಾಟಕ ಅನುದಾನ ರಹಿತ ಶಾಲೆಗಳ ಆಡಳಿತ ಮಂಡಳಿಗಳ ಸಂಘ [ರಿ] ಬೆಂಗಳೂರು ಇವರ ಮನವಿ ದಿನಾಂಕ: 01.07.2016
7. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 03.08.2017.
8. ನಿರ್ದೇಶಕರು[ಪರೀಕ್ಷೆಗಳು], ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಸ್.ಎಸ್.ಎಲ್.ಸಿ./ಶಾ.ಸಂ/ಮ.ಸಂ/16/2018–19. ದಿನಾಂಕ:20.08.2018.

-----****-----

ರಾಜ್ಯದಲ್ಲಿನ ಅನುದಾನಿತ ಪ್ರಾಥಮಿಕ/ಪ್ರೌಢಶಾಲೆಗಳ ಮಾನ್ಯತೆ ನವೀಕರಣ ವಿಚಾರವಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು [ಪ್ರಾಥಮಿಕ/ಪ್ರೌಢಶಿಕ್ಷಣ] ಮಾನ್ಯತೆ ನಿಯಮಗಳು–1999, ನಿಯಮ 3[1]ರಂತೆ ಖಾಸಗಿ ಶಿಕ್ಷಣ ಸಂಸ್ಥೆಗಳು ನಿಗಧಿತ ಕಾಲಕ್ಕೆ ಮಾನ್ಯತೆ ನವೀಕರಣ ಪಡೆಯುವುದು ಕಡ್ಡಾಯವಾಗಿರುತ್ತದೆ ಮತ್ತು ನಿಯಮ 4[1][ಕೆ] ರಂತೆ ವಿದ್ಯಾರ್ಥಿಗಳು ಕನಿಷ್ಠ 25 ಹಾಜರಾತಿಯನ್ನು ಕಾಯ್ದುಕೊಳ್ಳುವುದು ಸಹ ಕಡ್ಡಾಯವಾಗಿರುತ್ತದೆ.

ಕರ್ನಾಟಕ ಶಿಕ್ಷಣ ಕಾಯ್ದೆ 1983ರ ನಿಯಮ 36ರಡಿಯಲ್ಲಿ ಖಾಸಗಿ ಅನುದಾನಿತ/ಅನುದಾನ ರಹಿತ ಪ್ರೌಢಶಾಲೆಗಳ ಮಾನ್ಯತೆ ನವೀಕರಣ ಪ್ರಾಧಿಕಾರಿಗಳು ಸಂಬಂಧಪಟ್ಟ ಆಯಾ ಜಿಲ್ಲಾ ಉಪನಿರ್ದೇಶಕರಾಗಿರುತ್ತಾರೆ ಕೆಲವು ಅನುದಾನ ರಹಿತ/ಸಹಿತ ಪ್ರೌಢಶಾಲೆಗಳಿಗೆ ಮಾನ್ಯತೆ ನವೀಕರಣ ಪಡೆಯದೇ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕಷ್ಟ ಸಾದ್ಯವಾಗಿರುತ್ತದೆ.

**ಅನುದಾನಿತ ಪ್ರೌಢ ಶಾಲೆಗಳ ಬಗ್ಗೆ:-**

ಅನುದಾನಿತ ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದಲ್ಲಿನ ಖಾಸಗಿ ಅರ್ಹ ಅನುದಾನಿತ ಪ್ರೌಢಶಾಲೆಗಳಲ್ಲಿ ಮಾನ್ಯತೆ ನವೀಕರಣ ಆಗದೇ ಇರುವ ಶಾಲೆಗಳನ್ನು ಪಟ್ಟಿ ಮಾಡಿ ಅಂತಹ ಪ್ರೌಢಶಾಲೆಗಳಿಗೆ ಮಾನ್ಯತೆ ನವೀಕರಣವನ್ನು ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ವಿದ್ಯಾರ್ಥಿಗಳು ಹಾಜರಾಗಲು ಯಾವುದೇ

Scanned by CamScanner

ತೊಂದರೆಯಾಗದಂತೆ ಕಡ್ಡಾಯವಾಗಿ ಮಾಡತಕ್ಕದ್ದು. ಇದಲ್ಲದೆ ಮೇಲ್ಕಂಡ ನಿಯಮಮಗಳಡಿಯಲ್ಲಿ ವಿದ್ಯಾರ್ಥಿಗಳ ನಿಗಧಿತ ಸಂಖ್ಯಾಬಲವನ್ನು ಕಾಯ್ದುಕೊಳ್ಳದ ಅನುದಾನಿತ ಪ್ರೌಢ ಶಾಲೆಗಳಿಗೆ ಕರ್ನಾಟ ಶಿಕ್ಷಣಕಾಯಿದೆ 1983ರ ಅನ್ವಯವಾಗುವ ನಿಯಮಗಳಡಿಯಲ್ಲಿ ನೋಟೀಸ್ ಜಾರಿ ಮಾಡಿ ಮಾನ್ಯತೆಯನ್ನು ಹಿಂಪಡೆಯಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಪ್ರಸ್ತಾವನೆಯನ್ನು ಸಲ್ಲಿಸಲು ಆಯಾ ಜಿಲ್ಲಾ ಉಪನಿರ್ದೇಶಕರು ಕ್ರಮವಹಿಸತಕ್ಕದ್ದು.

**ಅನುದಾನರಹಿತ ಪ್ರೌಢ ಶಾಲೆಗಳ ಬಗ್ಗೆ:-**

ಖಾಸಗಿ ಅನುದಾನ ರಹಿತ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ ಸದರಿ ಶಾಲೆಗಳಲ್ಲಿನ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಿಂದ ವಂಚಿತರಾಗಬಾರದೆಂಬ ದೃಷ್ಟಿಯಿಂದ ಮಾನ್ಯತೆ ನಿಯಮಗಳ ಎಲ್ಲಾ ಷರತ್ತುಗಳನ್ನು ಪೂರೈಸಿರುವುದನ್ನು ಖಚಿತಪಡಿಸಿಕೊಂಡು ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಕನಿಷ್ಠ 25 ಸಂಖ್ಯೆಗೆ ವಿನಾಯಿತಿ ನೀಡಿ 2018-19ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಮಾನ್ಯತೆ ನವೀಕರಣ ಮಾಡಲು ಅನುಮತಿ ನೀಡಲಾಗಿದೆ. ಅದರಂತೆ ನಿಯಮಾನುಸಾರ ಕ್ರಮವಹಿಸಲು ತಿಳಿಸಿದೆ.

[ಮಾನ್ಯ ಆಯುಕ್ತರ ಆದೇಶದ ಮೇರೆಗೆ]

ನಿರ್ದೇಶಕರು [ಪ್ರೌಢ ಶಿಕ್ಷಣ]

**ಇವರಿಗೆ**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ
2. ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ ರವರಿಗೆ ಕಳುಹಿಸುತ್ತಾ, ನಿಮ್ಮ ವ್ಯಾಪ್ತಿಯಲ್ಲಿ ಬರುವ ಶಾಲೆಗಳ ಮಾನ್ಯತೆ ನವೀಕರಣದ ಬಗ್ಗೆ ಕ್ರಮ ಕೈಗೊಂಡು ನಿಗಧಿತ ನಮೂನೆಯಲ್ಲಿ ಮಾಹಿತಿ ನೀಡಲು ಕ್ರಮ ವಹಿಸಲು ಕೋರಿದೆ.
3. ನಿರ್ದೇಶಕರು[ಪರೀಕ್ಷೆಗಳು], ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು
4. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು
5. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು.
6. ಕಛೇರಿ ಪ್ರತಿ

\\10.96.135.73\F drive\sslc exam.doc

Scanned by CamScanner